ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	::	**1260**
ಸದಸ್ಯರ ಹೆಸರು	::	**ಶ್ರೀ ಕೆ.ಟಿ. ಶ್ರೀಕಂಠೇಗೌಡ(ಪದವೀಧರ ಕ್ಷೇತ್ರ)**
ಉತ್ತರಿಸುವ ದಿನಾಂಕ	::	**17.03.2021**
ಉತ್ತರಿಸುವ ಸಚಿವರು	::	**ಪಶುಸಂಗೋಪನೆ ಸಚಿವರು**

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	ರಾಜ್ಯದಲ್ಲಿ ಎಷ್ಟು ಪಶುಸಂಗೋಪನಾ ವಿಶ್ವವಿದ್ಯಾಲಯಗಳು ಸ್ಥಾಪನೆಗೊಂಡಿರುತ್ತವೇ;	ರಾಜ್ಯದಲ್ಲಿ ಕೇವಲ ಏಕೈಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರನಲ್ಲಿ ಸ್ಥಾಪನೆಗೊಂಡಿದ್ದು 2005 ರಿಂದ ತನ್ನ ಕಾರ್ಯಾರಂಭ ಮಾಡಿರುತ್ತದೆ.
ಆ)	ಈ ವಿಶ್ವವಿದ್ಯಾಲಯದಲ್ಲಿ ಪ್ರತಿ ವರ್ಷ ಎಷ್ಟು ವಿದ್ಯಾರ್ಥಿಗಳು ಪದವಿ ಮುಗಿಸಿ ಹೊರ ಬರುತ್ತಿದ್ದಾರೆ;	ಈ ವಿಶ್ವವಿದ್ಯಾಲಯದಲ್ಲಿ ಪ್ರತಿ ವರ್ಷ ಸ್ನಾತಕ ಪದವೀಧರರು ಈ ಕೆಳಕಂಡಂತೆ ಪದವಿ ಮುಗಿಸಿ ಹೊರ ಬರುತ್ತಿದ್ದಾರೆ.

ಕ್ರಸಂ	ಪದವಿ	ಒಟ್ಟು ವಿದ್ಯಾರ್ಥಿ
01	ಪಶುವೈದ್ಯಕೀಯ	269
02	ಹೈನುಗಾರಿಕೆ	61
03	ಮೀನುಗಾರಿಕೆ	42
	ಒಟ್ಟು	**372**

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಇ)	ಈ ವಿಶ್ವವಿದ್ಯಾಲಯದಲ್ಲಿ ಎಷ್ಟು ಹುದ್ದೆಗಳು ಮಂಜೂರಾಗಿವೆ; ಇವುಗಳಲ್ಲಿ ಖಾಲಿ ಹುದ್ದೆಗಳೆಷ್ಟು;	ವಿಶ್ವವಿದ್ಯಾಲಯದಲ್ಲಿ ಒಟ್ಟಾರೆ ಸಿಬ್ಬಂದಿಗಳ ಸಂಖ್ಯೆ, ನೇಮಕಗೊಂಡ ಸಿಬ್ಬಂದಿ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತೆ ಇರುತ್ತವೆ.

ಹುದ್ದೆ	ಮಂಜೂರಾದ ಹುದ್ದೆ	ಭರ್ತಿಯಾದ ಹುದ್ದೆಗಳು	ಖಾಲಿ ಇರುವ ಹುದ್ದೆಗಳು
ಬೋಧಕ	715	245	470
ಬೋಧಕೇತರ	1384	256	1128

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಈ)	ರಾಜ್ಯದ ಅವಶ್ಯಕತೆಗೆ ಅನುಗುಣವಾಗಿ ವಿದ್ಯಾರ್ಥಿಗಳು ಪದವಿ ಮುಗಿಸಿ ಹೊರ ಬರುತ್ತಿದ್ದಾರೆಯೇ;	ರಾಜ್ಯದಲ್ಲಿ ಅವಶ್ಯಕತೆಗೆ ಅನುಗುಣವಾಗಿ ವಿದ್ಯಾರ್ಥಿಗಳು ಪದವಿ ಮುಗಿಸಿ ಹೊರ ಬರುತ್ತಿದ್ದಾರೆ.

ಉ)	ಈ ವಿಶ್ವವಿದ್ಯಾಲಯದಲ್ಲಿ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?	ಈ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಭರ್ತಿ ಸಂಬಂಧ ಸರ್ಕಾರವು ದಿನಾಂಕ 11-12-2019 ರಂದು ನೇಮಕಾತಿ ಅಧಿಸೂಚನೆಗೆ ಅನುಮತಿಯನ್ನು ನೀಡಿರುತ್ತದೆ. ಆದರೆ ಸದರಿ ನೇಮಕಾತಿಗೆ ಕೋವಿಡ್-19 ಸಾಂಕ್ರಾಮಿಕ ರೋಗದ ನಿಮಿತ್ತ ಆರ್ಥಿಕ ಮಿತವ್ಯಯದ ಹಿನ್ನಲೆಯಲ್ಲಿ ಸರ್ಕಾರವು ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿದಿರುತ್ತದೆ. ಪುನ: ವಿಶ್ವವಿದ್ಯಾಲಯವು ಸದರಿ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ಪ್ರಕರಣವೆಂದು ಪರಿಗಣಿಸಿ ಅನುಮತಿ ನೀಡುವಂತೆ ಕೋರಿದ್ದು, ಈ ಬಗ್ಗೆ ಆರ್ಥಿಕ ಇಲಾಖೆಯು ಅನುಮತಿ ನೀಡಿದ ಕೂಡಲೇ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲಾಗುವುದು.

ಸಂಖ್ಯೆ: ಪಸಂಮೀ ಇ-51 ಪಆಸೇ 2021

(ಪ್ರಭು ಬಿ. ಚವ್ಹಾಣ್)
ಪಶುಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವರು